ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/40/ಗ್ರಾಪಂಅ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 03-11-2018.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ,

ಮಾನ್ಯರೆ,

ವಿಷಯ: ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅಪೀಲ್ ಸಂಖ್ಯೆ: 844/2018 ರಲ್ಲಿ ನೀಡಿರುವ ತೀರ್ಪಿನಂತೆ ಕ್ರಮ ಜರುಗಿಸುವ ಬಗ್ಗೆ.

ಉಲ್ಲೇಖ:
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018, ದಿನಾಂಕ: 17.04.2018.
3. ಸರ್ಕಾರದ ಪತ್ರ ಸಂಖ್ಯ: ಗ್ರಾಅಪ 40 ಗ್ರಾಪಂಅ 2018 ದಿನಾಂಕ: 12.06.2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಕಾಯ್ದೆ-1993 ರ ಕಲಂ 49 ರನ್ವಯ ಅಧ್ಯಕ್ಷ/ಉಪಾಧ್ಯಕ್ಷರ ಅವಿಶ್ವಾಸ ಗೊತ್ತುವಳಿಯನ್ನು ಮಂಡಿಸಿರುವುದು ಕಂಡುಬರುತ್ತದೆ ಹಾಗೂ ಸದರಿ ಅವಿಶ್ವಾಸ ನಿರ್ಣಯದ ವಿರುದ್ಧ ಹಲವು ಗ್ರಾಮ ಪಂಚಾಯತಿ ಅಧ್ಯಕ್ಷರುಗಳು ಈ ಪ್ರಕರಣಗಳಲ್ಲಿ ಮಾನು ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಹಾಗೂ ರಿಟ್ ಅಪೀಲ್‌ಗಳನ್ನು ದಾಖಲಿಸಿರುತ್ತಾರೆ.

ದಿನಾಂಕ: 12-10-2018 ರಂದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ಪ್ರಕರಣದಲ್ಲಿ ಅಂತಿಮ ಆದೇಶ ಹೊರಡಿಸಿರುತ್ತದೆ ಆದ್ದರಿಂದ ಸದರಿ ಪ್ರರಕಣದಲ್ಲಿ ಈ ಹಿಂದೆ ಉಲ್ಲೇಖ (1) ಮತ್ತು (2) ರಲ್ಲಿ ಹೊರಡಿಸಲಾಗಿರುವ ಸುತ್ತೋಲೆ ಹಾಗೂ ಪತ್ರಗಳನ್ನು ಹಾಗೂ ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸದಂತೆ ನೀಡಲಾದ ಎಲ್ಲಾ ಪತ್ರಗಳನ್ನು ಈ ಮೂಲಕ ಹಿಂಪಡೆಯಲಾಗಿರುತ್ತದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ. ಮುಂದುವರೆದು ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯದ ವಿವಿಧ ಪೀಠಗಳಲ್ಲಿ ಬಾಕಿ ಇರುವ ರಿಟ್ ಅರ್ಜಿಗಳಿಗೆ ಹಾಗೂ ರಿಟ್ ಅಪೀಲ್‌ಗಳಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಪೀಠಗಳು ನೀಡುವ ಆದೇಶದಂತೆ ಮುಂದಿನ ಕ್ರಮ ಕೈಗೊಳ್ಳಲು ಸಹ ತಿಳಿಸಿದೆ.

ತಮ್ಮ ನಂಬುಗೆಯ,

3/11

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ,
2. ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ,
3. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
4. ನಗಾಠ ಕಡತ